ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಎರಡನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 12ನೇ ಡಿಸೆಂಬರ್, 2018
(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂರನೇ ಪಟ್ಟಿ

2. ವರದಿಯನ್ನೊಪ್ಪಿಸುವುದು

ಶ್ರೀ ಎಸ್.ಟಿ. ಸೋಮಶೇಖರ್ (ಅಧ್ಯಕ್ಷರು, ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ) ಅವರು 2018-19ನೇ ಸಾಲಿನ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ 34ನೇ ವರದಿಯನ್ನೊಪ್ಪಿಸುವುದು.

3. ಚುನಾವಣಾ ಪ್ರಸ್ತಾವ

ಶ್ರೀ ಕೃಷ್ಣಭೈರೇಗೌಡ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) ಅವರು:-

ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ಅಧಿನಿಯಮ, 1994ರ ಕಲಂ 21(1) (vii)ರ ಅನ್ವಯ ವರ್ಗಾಯಿಸಬಹುದಾದ ಒಂಟಿ ಮತದ ಮೂಲಕ ದಾಮಾಷಾ ಪ್ರಾತಿನಿಧ್ಯದ ತತ್ವದ ಆಧಾರದ ಮೇಲೆ ಈ ಸಭೆಯು **ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ಸೆನೆಟ್‌ಗೆ ಮೂರು ಜನ ಸದಸ್ಯರನ್ನು ಚುನಾಯಿಸಬೇಕೆಂದು** ಸೂಚಿಸುವುದು.

... 2/ ..

4. ಶಾಸನ ರಚನೆ

I. ವಿಧೇಯಕಗಳನ್ನು ಮಂಡಿಸುವುದು

1. ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–

ಅ) 2018ನೇ ಸಾಲಿನ ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2. ಶ್ರೀ ಪ್ರಿಯಾಂಕ ಖರ್ಗೆ (ಮಾನ್ಯ ಸಮಾಜ ಕಲ್ಯಾಣ ಸಚಿವರು) ಅವರು:–

ಅ) 2018ನೇ ಸಾಲಿನ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3. ಶ್ರೀ ಸಿ. ಪುಟ್ಟರಂಗಶೆಟ್ಟಿ (ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು) ಅವರು:–

ಅ) 2018ನೇ ಸಾಲಿನ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಬಿ.ಎಸ್.ಯಡಿಯೂರಪ್ಪ, ಗೋವಿಂದ.ಎಂ.ಕಾರಜೋಳ, ಜಗದೀಶ್ ಶೆಟ್ಟರ್ ಮತ್ತಿತರರು** – ರಾಜ್ಯದಲ್ಲಿ ನೂರಕ್ಕೂ ಹೆಚ್ಚು ತಾಲ್ಲೂಕುಗಳಲ್ಲಿ ಬರಗಾಲದಿಂದ ರೈತರು ಕಂಗಾಲಾಗಿ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ.

2) **ಶ್ರೀಯುತರುಗಳಾದ ಗೋವಿಂದ.ಎಂ.ಕಾರಜೋಳ, ಎಂ.ಪಿ.ರೇಣುಕಾಚಾರ್ಯ ಮತ್ತು ಕಳಕಪ್ಪ ಗುರುಶಾಂತಪ್ಪ ಬಂಡಿ ಇವರುಗಳು** – ಬಾಗಲಕೋಟೆ ಜಿಲ್ಲೆಯ ಜಮಖಂಡಿ, ಮುಧೋಳ, ಬೀಳಗಿ ತಾಲ್ಲೂಕುಗಳಲ್ಲಿನ ಕೃಷಿ ಭೂಮಿಗೆ ನೀರಾವರಿ ಸೌಲಭ್ಯ ಒದಗಿಸುವ ಸಂಬಂಧ ಸಸಾಲಟ್ಟಿ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ ಕೆ.ಎಂ.ಶಿವಲಿಂಗೇಗೌಡ, ಕೆ.ಎಸ್.ಲಿಂಗೇಶ್ ಮತ್ತು ಸಿ.ಎನ್.ಬಾಲಕೃಷ್ಣ ಇವರುಗಳು** – ಎತ್ತಿನಹೊಳೆ ಕುಡಿಯುವ ನೀರಿನ ಯೋಜನೆಯಡಿಯಲ್ಲಿ ಸಕಲೇಶಪುರ, ಬೇಲೂರು ಮತ್ತು ಅರಸೀಕೆರೆ ತಾಲ್ಲೂಕುಗಳಲ್ಲಿನ ರೈತರಿಗೆ ಪರಿಹಾರ ನೀಡುವಲ್ಲಿ ವಿಳಂಬವಾಗುತ್ತಿದ್ದು ಯೋಜನೆಯನ್ನು ತ್ವರಿತಗೊಳಿಸುವ ಬಗ್ಗೆ ಚರ್ಚಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

6. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ದೊಡ್ಡನಗೌಡರ ಮಹಾಂತೇಶ ಬಸವಂತರಾಯ್ ಅವರು** – ಕಿತ್ತೂರನ್ನು ತಾಲ್ಲೂಕು ಕೇಂದ್ರವಾಗಿ ಘೋಷಣೆ ಮಾಡಿ, ಸುಮಾರು 7 ವರ್ಷ ಕಳೆದರೂ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಹಣ ನೀಡದೇ ಇರುವುದರಿಂದ ಅಲ್ಲಿನ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿದ್ದು ತಾಲ್ಲೂಕಿನ ಸಮಗ್ರ ಅಭಿವೃದ್ಧಿಗಾಗಿ ವಿಶೇಷ ಪ್ಯಾಕೇಜ್ ನೀಡುವ ಬಗ್ಗೆ ಮಾನ್ಯ ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

2) **ಶ್ರೀಮತಿ ಕೆ.ಪೂರ್ಣಿಮಾ ಮತ್ತು ಶ್ರೀ ಜೆ.ಸಿ.ಮಾಧುಸ್ವಾಮಿ ಅವರು** – ತೆಂಗಿನ ಬೆಳೆಯು ಮಳೆಯ ಅಭಾವದಿಂದ / ವಿವಿಧ ರೋಗಗಳಿಂದ ನಾಶವಾಗುತ್ತಿದ್ದು, ಒಂದು ಗಿಡಕ್ಕೆ ರೂ.400/- ರಂತೆ ಪರಿಹಾರ ಮೊತ್ತ ನೀಡಲು ಪ್ರಸ್ತಾಪವಿದ್ದು, ಸದರಿ ಪರಿಹಾರ ಮೊತ್ತವು ಅವೈಜ್ಞಾನಿಕವಾಗಿರುವುದರಿಂದ ಅದನ್ನು ಪರಿಷ್ಕರಿಸಿ ಹೆಚ್ಚಿಸುವ ಬಗ್ಗೆ ಮಾನ್ಯ ತೋಟಗಾರಿಕಾ ಸಚಿವರ ಗಮನ ಸೆಳೆಯುವುದು.

3) **ಶ್ರೀಮತಿ ಲಕ್ಷ್ಮೀ ಆರ್.ಹೆಬ್ಬಾಳ್ಕರ್ ಅವರು** – ಬೆಳಗಾವಿ ಗ್ರಾಮೀಣ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಹಲಗಾ, ಕೊಂಡಸಕೊಪ್ಪ, ಬಸ್ತವಾಡ, ಕಮಕಾರಕಟ್ಟಿ ಹಾಗೂ ರಕ್ಕಸಕೊಪ್ಪ ಗ್ರಾಮಗಳಲ್ಲಿ ಕುಡಿಯುವ ನೀರಿನ ತೊಂದರೆ ಇರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

... 4/ ..

4) **ಶ್ರೀ ಸಿ.ಟಿ.ರವಿ ಹಾಗೂ ಶ್ರೀ ಬೆಳ್ಳಿಪ್ರಕಾಶ್ ಇವರುಗಳು** – ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯು ಸಮರ್ಪಕವಾಗಿ ಅನುಷ್ಠಾನವಾಗದೇ ಇರುವುದು ಹಾಗೂ ಆ ಯೋಜನೆಯಲ್ಲಿನ ಮಾರ್ಗಸೂಚಿಯಲ್ಲಿ ಕೆಲವೊಂದು ಬದಲಾವಣೆ ತರುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

5) **ಶ್ರೀ ಎನ್.ಎ. ಹ್ಯಾರೀಸ್ ಅವರು** – ರಾಜ್ಯದಲ್ಲಿ ಮತದಾರರ ಪಟ್ಟಿಗೆ ಹೆಸರನ್ನು ಸೇರ್ಪಡೆಗೊಳಿಸುವ ಪ್ರಕ್ರಿಯೆಯಲ್ಲಿ ಹಲವಾರು ಲೋಪದೋಷಗಳಿದ್ದು, ಅದರಲ್ಲೂ ವಿಶೇಷವಾಗಿ ವಿದೇಶಗಳಲ್ಲಿ ನೆಲೆಸಿದ ನಂತರ ದೇಶಕ್ಕೆ ಹಿಂದಿರುಗುವವರು ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ನೋಂದಾಯಿಸಲು ಹೆಚ್ಚು ತೊಂದರೆ ಅನುಭವಿಸುತ್ತಿದ್ದು, ನೈಜ ಭಾರತೀಯ ವಾಸಿಗಳು ಮತದಾರರ ಪಟ್ಟಿಗೆ ತಮ್ಮ ಹೆಸರನ್ನು ಸೇರ್ಪಡೆಗೊಳಿಸುವ ಪ್ರಕ್ರಿಯೆಯನ್ನು ಸರಳಗೊಳಿಸುವ ಬಗ್ಗೆ ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

6) **ಶ್ರೀ ಸಿ.ಟಿ.ರವಿ, ಶ್ರೀ ಎಸ್.ಸುರೇಶ್ ಕುಮಾರ್ ಮತ್ತು ಶ್ರೀ ಪ್ರೀತಮ್‌ಗೌಡ ಇವರುಗಳು** – ಕೆ.ಎಸ್.ಆರ್.ಪಿ., ಐ.ಆರ್.ಬಿ. ಮತ್ತು ಕೆ.ಎಸ್.ಐ.ಎಸ್.ಎಫ್. ನಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಅಂತಿಮ ಆಯ್ಕೆ ಪಟ್ಟಿಯನ್ನು 2014ನೇ ಸಾಲಿನಲ್ಲಿ ಪ್ರಕಟಿಸಿದ್ದು ಆಯ್ಕೆಗೊಂಡಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶವನ್ನು ನೀಡುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

7) **ಶ್ರೀ ಟಿ.ಡಿ. ರಾಜೇಗೌಡ ಅವರು** – ಕರ್ನಾಟಕ ಲೋಕಸೇವಾ ಆಯೋಗದ ಪರೀಕ್ಷೆಗಳು ಹಾಗೂ ನೆಟ್ ಪರೀಕ್ಷೆಗಳನ್ನು ಒಂದೇ ದಿನ ಅಂದರೆ ದಿನಾಂಕ: 16.12.2018ರಂದು ನಡೆಸಲು ನಿಗದಿಪಡಿಸಿರುವುದರಿಂದ ಸಾವಿರಾರು ವಿದ್ಯಾರ್ಥಿಗಳು ಸಂಕಷ್ಟಕ್ಕೆ ಸಿಲುಕಿರುವ ವಿಷಯದ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

8) **ಶ್ರೀ ಗೂಳಿಹಟ್ಟಿ.ಡಿ.ಶೇಖರ್ ಅವರು** – ಚಿತ್ರದುರ್ಗದ ಹೊಸದುರ್ಗ ತಾಲ್ಲೂಕಿನ ವಾಣಿ ವಿಲಾಸ ಸಾಗರದ ಹಿನ್ನೀರು ಮುಳುಗಡೆ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಮಾಡದಕೆರೆ, ಮತ್ತೋಡು ಮತ್ತು ಶ್ರೀರಾಂಪುರ ಹೋಬಳಿಗಳ ಸಂಪರ್ಕಕ್ಕೆ ಅವಶ್ಯವಿರುವ ಸೇತುವೆ ಕಾಮಗಾರಿಯನ್ನು ಕೈಗೆತ್ತಿಕೊಳ್ಳುವ ಕುರಿತು ಮಾನ್ಯ ಬೃಹತ್ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

ಎಸ್. ಮೂರ್ತಿ
ಕಾರ್ಯದರ್ಶಿ

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm